# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ–3/ಎ3/ಹೊ.ಕೋ./JICM/2024-2025

ಜ್ಞಾನಭಾರತಿ
ಬೆಂಗಳೂರು–560 056
ದಿನಾಂಕ:**27**.11.2024.

## ಅಧಿಸೂಚನೆ

ವಿಷಯ : **2024–25**ನೇ ಶೈಕ್ಷಣಿಕ ಸಾಲಿಗೆ ಹೊಸ ಕೋರ್ಸ್ ಸಂಯೋಜನೆ ನೀಡುವ ಬಗ್ಗೆ.
ಉಲ್ಲೇಖ: 1. ಸರ್ಕಾರದ ಆದೇಶ ಇ–ಕಛೇರಿ ಸಂಖ್ಯೆ:ಇಡಿ/225/ಯುಬಿವಿ/2024, ದಿ:31.08.2024.
2. ಕುಲಪತಿಯವರಅನುಮೋದನೆ ದಿನಾಂಕ: 22.11.2024.

*****

ಕರ್ನಾಟಕರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ11ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರದನ್ವಯ, 2024–25ನೇ ಸಾಲಿನಿಂದ **ಜ್ಯೋತಿ ಇನ್ಸ್‌ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್**, ನಂ.40/5, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು–560 082, ಈ ಕಾಲೇಜಿಗೆ ಕೆಳಕಂಡ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸಂಯೋಜನೆಯನ್ನು ಮಂಜೂರು ಮಾಡಲಾಗಿದೆ.

| ಕೋರ್ಸು (Programme) | ವಿಷಯವಾರು ( Subject / Combination) | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಬಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |

**ಷರತ್ತುಗಳು:**

1. ಪ್ರತಿ ಶೈಕ್ಷಣಿಕ ವರ್ಷದ ಎ.ಐ.ಸಿ.ಟಿ.ಇಯ ವಿಸ್ತರಣಾ ಅನುಮೋದನೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು.
2. ಎ.ಐ.ಸಿ.ಟಿ.ಇ, ನವದೆಹಲಿ, ಕರ್ನಾಟಕ ಸರ್ಕಾರ, ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ವಿಧಿಸಿರುವ /ವಿಧಿಸುವ ಷರತ್ತು ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
3. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯವು ಅಂಗೀಕಾರ ನೀಡುವುದಿಲ್ಲ.
4. ಯಾವುದೇ ಕೋರ್ಸಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿ ಇಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
5. ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಕರ್ನಾಟಕ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳ ಅಭ್ಯರ್ಥಿಗಳ ಆಯ್ಕೆ ನಿಯಮಗಳನ್ವಯ ಮಾತ್ರ ಪಡೆಯತಕ್ಕದ್ದು.
6. 2024–25ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು.

7. ವಿದ್ಯಾರ್ಥಿ ಪ್ರಮಾಣದ ನಿಗಧಿಯನ್ನೊಳಗೊಂಡಂತೆ ಸಂಯೋಜನೆಯ ಬಗ್ಗೆ ಸರ್ಕಾರವು ವಿಧಿಸಿರುವ ಎಲ್ಲಾ ಷರತ್ತುಗಳನ್ನು ಕಟ್ಟುನಿಟ್ಟಾಗಿ ತಪ್ಪದೇ ನಿಗಧಿತ ಅವಧಿಯೊಳಗೆ ಪೂರೈಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021 ದಿನಾಂಕ: 12-02-2021ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ ಎರಡು ವರ್ಷಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು Defined Parameters ಗಳನ್ನು ಪೂರೈಸಲು ಕ್ರಮವಹಿಸತಕ್ಕದ್ದು.

9. ಸರ್ಕಾರವು ನಿರ್ದೇಶಿಸಿರುವಂತೆ ಸಂಯೋಜಿತ ಕೋರ್ಸುಗಳಿಗೆ ಕಡ್ಡಾಯವಾಗಿ ಸರ್ಕಾರದ UUCMS ಪೋರ್ಟಲ್ ಮೂಲಕವೇ ಪ್ರವೇಶಾತಿಯನ್ನು ಮಾಡತಕ್ಕದ್ದು.

10. ಕಾಲೇಜು/ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

11. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

12. ವೈಶಾಕ v/s ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟುಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ(ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕಳ, ಲೈಂಗಿಕ ಕಿರುಕಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

13. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

14. ವಿದ್ಯಾರ್ಥಿಗಳು ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

15. ಕಾಲೇಜು ವಿದ್ಯಾರ್ಥಿಗಳ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ ಹಾಗೂ ಇತರೇ ದಾಖಲೆಗಳನ್ನು ಮೂರು ತಿಂಗಳ ಅವದಿಯೊಳಗೆ ವಿದ್ಯಾರ್ಥಿಗಳಿಗೆ ನೀಡಬೇಕು. ಅವಧಿ ಮೀರಿದ ನಂತರ ತಮ್ಮಲ್ಲಿಯೇ ಉಳಿದುಕೊಂಡಿರುವ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತಗಳ ಬಗ್ಗೆ ಕುಲಸಚಿವರು (ಮೌಲ್ಯಮಾಪನ) ಇವರಿಗೆ ವರದಿ ನೀಡತಕ್ಕದ್ದು.

16. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

17. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

18. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

19. 2024–25ನೇ ಸಾಲಿಗೆ ಸದರಿ ಕೋರ್ಸಿನ ಸಂಯೋಜನಾ ನವೀಕರಣಕ್ಕಾಗಿ ಅರ್ಜಿಯನ್ನು ತಪ್ಪದೇ ಸಲ್ಲಿಸತಕ್ಕದ್ದು.

20. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್ (NAAC/NBA) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.

21. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆದೇಶದ ಮೇರೆಗೆ

27/11/24.

ಕುಲಸಚಿವರು

ಗೆ,

**ಪ್ರಾಂಶುಪಾಲರು,**
**ಜ್ಯೋತಿ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್,**
**ನಂ.40/5, ತಾತಗುಣಿ, ಕನಕಪುರ ರಸ್ತೆ,**
**ಬೆಂಗಳೂರು–560 082.**

ಪ್ರತಿಗಳು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು–560 001.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು–560 001.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು–560 056.
4) ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ–1, ಬೆಂ.ವಿ. ಬೆಂಗಳೂರು–56.
5) ಅಧೀಕ್ಷಕರು, ಕಾನ್ಫಿಡೆನ್ಷಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು–56.